ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1980

ಮಾನ್ಯ ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 23-03-2021

ಉತ್ತರಿಸುವ ಸಚಿವರು : ಪೌರಾಡಳಿತ ಮತ್ತು ಸಕ್ಕರೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದ ಸಕ್ಕರೆ ಸಂಶೋಧನಾ ಸಂಸ್ಥೆಯಾದ ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯು ಮೂಲ ಸೌಲಭ್ಯಗಳ ಕೊರತೆಯಿಂದ ಚಟುವಟಿಕೆಗಳು ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜ್ಯದ ಉತ್ತರ ಭಾಗದ ಸಕ್ಕರೆ ಕಾರ್ಖಾನೆಗಳು ಮತ್ತು ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಕಬ್ಬಿನ ಮತ್ತು ಸಕ್ಕರೆಗೆ ಸಂಬಂಧಿಸಿದ ಸಂಶೋಧನೆ, ಶೈಕ್ಷಣಿಕತೆ ಮತ್ತು ವಿಸ್ತರಣಾ ಕೆಲಸಗಳನ್ನು ಉತ್ತೇಜಿಸಲು ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಇದನ್ನು ಸರ್ಕಾರದ ಆದೇಶ ಸಂಖ್ಯೆ:ಸಿಐ/193/ಎಸ್‌ಜಿಎಫ್/94 ದಿನಾಂಕ 08.10.2003 ರನ್ವಯ ಸ್ಥಾಪಿಸಲಾಗಿರುತ್ತದೆ. ಸದರಿ ಸಂಸ್ಥೆಯನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ, 1959 ಹಾಗೂ ನಿಯಮಗಳು, 1960 ರಡಿಯಲ್ಲಿ ನೋಂದಣಿ ಮಾಡಲಾಗಿದೆ. ಬೆಳಗಾವಿಯಲ್ಲಿ ಪ್ರಯೋಗಾಲಯ ಮತ್ತು ಆಡಳಿತ ಕಛೇರಿಯನ್ನು ನಿರ್ಮಿಸಲು ಸಂಸ್ಥೆಗೆ ಸರ್ಕಾರದಿಂದ 3.12 ಎಕರೆ ಜಮೀನನ್ನು ನೀಡಲಾಗಿರುತ್ತದೆ. ಇದಲ್ಲದೆ, ಕಬ್ಬಿನ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಗಳನ್ನು ರೂಪಿಸಲು ಬೆಳಗಾವಿ ಮತ್ತು ಹುಕ್ಕೇರಿ ತಾಲ್ಲೂಕುಗಳಲ್ಲಿ 143.31 ಎಕರೆ ಜಮೀನನ್ನು ಸಹಾ ಒದಗಿಸಲಾಗಿದೆ. ಸದರಿ ಸಂಸ್ಥೆಯು ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೆ ರಾಜ್ಯ ಸರ್ಕಾರವು ಒಟ್ಟು ರೂ.19.23 ಕೋಟಿಗಳಷ್ಟು
		ಅನುದಾನವನ್ನು ಹಂತ ಹಂತವಾಗಿ ಮಂಜೂರು ಮಾಡಿ ಬಿಡುಗಡೆ ಮಾಡಿರುತ್ತದೆ. ಸಂಸ್ಥೆಯ ಕಾರ್ಯ ಚಟುವಟಿಕೆಗಳನ್ನು ಉತ್ತೇಜಿಸಲು ಸರ್ಕಾರವು ಎಲ್ಲಾ ರೀತಿಯ ಮೂಲ ಸೌಲಭ್ಯಗಳನ್ನು ಸಂಸ್ಥೆಗೆ ಒದಗಿಸುತ್ತಿದೆ. ಈ ಸಂಸ್ಥೆಯ ಸ್ಥಾಪನೆಯಿಂದ ಪ್ರಾರಂಭಿಸಿ, ಇಲ್ಲಿಯವರೆಗೂ ಸರ್ಕಾರದಿಂದ ಅಗತ್ಯವಾದ ಸಹಾಯಧನ, ಭೂಮಿ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ. ಮುಂದಿನ ದಿನಗಳಲ್ಲೂ ಸಹ ಅಗತ್ಯವಿರುವ ಆರ್ಥಿಕ ನೆರವನ್ನು ನೀಡುವ ಮೂಲಕ ಸಂಸ್ಥೆಯ ಪೂರ್ಣ ಅಭಿವೃದ್ಧಿಗೆ ಸರ್ಕಾರವು ನೆರವಾಗಲಿದೆ. ಆದ್ದರಿಂದ ಪ್ರಸ್ತುತ ಸದರಿ ಸಂಸ್ಥೆಯ ಮೂಲ ಸೌಲಭ್ಯಗಳ ಕೊರತೆಯಿಂದ ಚಟುವಟಿಕೆಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
(ಆ)	ಹಾಗಿದ್ದಲ್ಲಿ ಸದರಿ ಸಕ್ಕರೆ ಸಂಸ್ಥೆಯನ್ನು ಮುಂಬಯಿಯ ವಸಂತದಾದಾ ಸಕ್ಕರೆ ಸಂಶೋಧನಾ ಸಂಸ್ಥೆ ಮಾದರಿಯಲ್ಲಿ ಅಭಿವೃದ್ದಿಪಡಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಮಹಾರಾಷ್ಟ್ರ ರಾಜ್ಯದ ಪುಣೆಯಲ್ಲಿ ಸ್ಥಾಪಿತವಾಗಿರುವಂತಹ ವಸಂತದಾದಾ ಸಕ್ಕರೆ ಸಂಸ್ಥೆಯ ಮಾದರಿಯಲ್ಲಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನು ಅಭಿವೃದ್ಧಿಗೊಳಿಸುವ ದಿಸೆಯಲ್ಲಿ ವಸಂತದಾದಾ ಸಕ್ಕರೆ ಸಂಸ್ಥೆಯ ಬಗ್ಗೆ ವಿಷಯ ತಜ್ಞರಿಂದ ಸಮಗ್ರ ಅಧ್ಯಯನ ನಡೆಸಿ, ವರದಿ ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಬಹುದಾಗಿರುತ್ತದೆ.

......2

(ಇ)	ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನು ಯಾವಾಗ ಪ್ರಾರಂಭಿಸಲಾಯಿತು; ಇಲ್ಲಿಯವರೆಗಿನ ಸಂಸ್ಥೆಯ ಬೆಳವಣಿಗೆ ಮತ್ತು ಪ್ರಗತಿಯ ವಿವರ ಒದಗಿಸುವುದು; ಮತ್ತು ಸಂಸ್ಥೆಯ ಆರ್ಥಿಕ ಸಾಫಲ್ಯತೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು: (ವಿವರ ನೀಡುವುದು)	ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನು ಸರ್ಕಾರದ ಆದೇಶ ಸಂಖ್ಯೆ:ಸಿಐ/193/ಎಸ್‌ಜಿಎಫ್/94 ದಿನಾಂಕ 08.10.2003ರ ರೀತ್ಯಾ ಪ್ರಾರಂಭಿಸಲಾಗಿದೆ. ಇಲ್ಲಿಯವರೆಗೆ ಸಂಸ್ಥೆಯ ಬೆಳವಣಿಗೆ ಮತ್ತು ಪ್ರಗತಿಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. 1. ಕೇಂದ್ರ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಅಭಿವೃದ್ಧಿ ಮತ್ತು ಸಂಶೋಧನಾ ಕಾರ್ಯಕ್ರಮಗಳನ್ನು ಗುರುತಿಸಿ ಈ ಸಂಸ್ಥೆಯನ್ನು ಒಂದು ವೈಜ್ಞಾನಿಕ ಸಂಶೋಧನಾ ಸಂಸ್ಥೆಯೆಂದು ಮಾನ್ಯತೆ ನೀಡಿರುತ್ತದೆ. 2. ಕೇಂದ್ರ ಸರ್ಕಾರದ ಭಾರತೀಯ ಕೃಷಿ ಅನುಸಂಧಾನ ಪರಿಷತ್ತು, ನವದೆಹಲಿ ಇವರು ಈ ಸಂಸ್ಥೆಯು ಸಕ್ಕರೆ ಕಾರ್ಖಾನೆಗಳಿಗೆ ಮತ್ತು ಕಬ್ಬು ಬೆಳೆಗಾರರಿಗೆ ಹೊಸ ತಳಿಗಳನ್ನು ನೀಡುತ್ತಿರುವುದನ್ನು ಗಮನಿಸಿ, ಇದನ್ನು ರಾಷ್ಟ್ರಮಟ್ಟದಲ್ಲಿರುವ ಕಬ್ಬು ಸಂಶೋಧನಾ ಕೇಂದ್ರಗಳಲ್ಲಿ ಒಂದು ಎಂದು ಪರಿಗಣಿಸಿರುತ್ತಾರೆ. 3. ಕಬ್ಬು ಬೆಳೆಗಾರರು ಹೆಚ್ಚಿನ ಇಳುವರಿಯನ್ನು ಸತತವಾಗಿ ಪಡೆಯಲು ರೋಗ ಹಾಗೂ ಕೀಟರಹಿತ ಬೀಜಗಳ ಅವಶ್ಯಕತೆ ಇರುವುದರಿಂದ ಈ ತಾಂತ್ರಿಕತೆಯನ್ನು ಅಳವಡಿಸಲು ಅಂಗಾಂಶ ಕೃಷಿ ಪ್ರಯೋಗಾಲಯವನ್ನು ಸ್ಥಾಪಿಸಲಾಗಿದೆ. ಆ ಮೂಲಕ ಸಕ್ಕರೆ ಕಾರ್ಖಾನೆಗಳು ಮತ್ತು ಕಬ್ಬು ಬೆಳಗಾರರಿಗೆ ಸಹಾಯ ನೀಡಲಾಗುತ್ತಿದೆ. 4. ಸರ್ಕಾರದಿಂದ ಸಂಸ್ಥೆಗೆ ಯರಗಟ್ಟಿ ಗ್ರಾಮದಲ್ಲಿ ಕಬ್ಬು ಸಂಶೋಧನೆ ಮತ್ತು ಅಭಿವೃದ್ಧಿಗಾಗಿ 50 ಎಕರೆ ಜಮೀನನ್ನು ನೀಡಲಾಗಿದೆ. ಇಲ್ಲಿ ಹೊಸ ತಳಿಗಳ ಅಭಿವೃದ್ಧಿ ಹಾಗೂ ಬೀಜೋತ್ಪಾದನೆ ಮತ್ತು ಇತರೆ ಚಟುವಟಿಕೆಗಳನ್ನು ಪ್ರಾರಂಭಿಸಲಾಗಿದೆ. 5. ಸಕ್ಕರೆ ಕಾರ್ಖಾನೆಗಳಿಗೆ ತಾಂತ್ರಿಕ ಮಾನವ ಸಂಪನ್ಮೂಲವನ್ನು ಒದಗಿಸಲು ಸಂಸ್ಥೆಯಲ್ಲಿ ಬಿ.ಎಸ್ಸಿ (ಸಕ್ಕರೆ ವಿಜ್ಞಾನ ಮತ್ತು ತಂತ್ರಜ್ಞಾನ) 3 ವರ್ಷಗಳ ಪದವಿ ಕೋರ್ಸನ್ನು ಪ್ರಾರಂಭಿಸಲಾಗಿದೆ ಹಾಗೂ ಎಂ.ಎಸ್ಸಿ (ಆಲ್ಕೋಹಾಲ್ ಟೆಕ್ನಾಲಜಿ ಮತ್ತು ಶುಗರ್ ಟೆಕ್ನಾಲಜಿ) ಸ್ನಾತಕೋತ್ತರ ಪದವಿ ತರಗತಿಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ. 6. ಜೈವಿಕ ಶುದ್ಧೀಕರಣ ಪ್ರಯೋಗಾಲಯವನ್ನು ಸ್ಥಾಪಿಸಲಾಗಿದ್ದು, ಸಕ್ಕರೆ ಕಾರ್ಖಾನೆಗಳಿಗೆ ಸಕ್ಕರೆ ಗುಣಮಟ್ಟ, ಮೊಲ್ಯಾಸಿಸ್ ಮತ್ತು ಉದ್ದಿಮೆಗೆ ಅವಶ್ಯವಿರುವ ಇತರೆ ಗುಣಧರ್ಮಗಳ ವಿಶ್ಲೇಷಣೆ ಮಾಡಲಾಗುತ್ತಿದೆ. 7. ಸಂಸ್ಥೆಯು ಕಬ್ಬು ಮತ್ತು ಸಕ್ಕರೆ ಉದ್ಯಮದ ಹಲವಾರು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಪ್ರತಿಷ್ಠಿತ ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ಹೊಸ ತಳಿಗಳ ಅಭಿವೃದ್ಧಿ, ತಾಂತ್ರಿಕ ಪ್ರಾವೀಣ್ಯತೆ ಪಡೆಯುವ ಸಂಬಂಧ ವಿಚಾರ ಸಂಕೀರ್ಣ ಮತ್ತು ಕಾರ್ಯಾಗಾರಗಳನ್ನು ಏರ್ಪಾಡು ಮಾಡುತ್ತಿದೆ. 8. ಕಬ್ಬು ಬೇಸಾಯದಲ್ಲಿ ಸಾವಯವ ಕೃಷಿಯನ್ನು ಅಳವಡಿಸುವ ನಿಟ್ಟಿನಲ್ಲಿ ಜೈವಿಕ ಪೀಡೆ ಮತ್ತು ಗೊಬ್ಬರಗಳ ಉತ್ಪಾದನಾ ಘಟಕ ಸ್ಥಾಪಿಸಲಾಗಿದೆ.

......3

		9. ಕಬ್ಬು ಮತ್ತು ಸಕ್ಕರೆ ಉದ್ದಿಮೆಗೆ ತಾಂತ್ರಿಕತೆಯನ್ನು ಒದಗಿಸುವ ನಿಟ್ಟಿನಲ್ಲಿ ಕಬ್ಬು ಬೆಳೆಗಾರರಿಗೆ ಮತ್ತು ಸಕ್ಕರೆ ಕಾರ್ಖಾನೆ ನೌಕರರಿಗೆ ತರಬೇತಿ, ವಿಚಾರಗೋಷ್ಠಿ, ಕಾರ್ಯಾಗಾರ ಹಾಗೂ ವಿಚಾರ ಸಂಕೀರ್ಣಗಳನ್ನು ಏರ್ಪಡಿಸುತ್ತಿದೆ. ಇದಕ್ಕೆ ಪೂರಕವಾಗಿ ತರಬೇತಿದಾರರು ಮತ್ತು ವಿಷಯ ಪರಿಣತರಿಗೆ ವಸತಿ ಸೌಕರ್ಯವನ್ನು ಕಲ್ಪಿಸಲಾಗಿರುತ್ತದೆ. 10. ಕಬ್ಬು ಮತ್ತು ಸಕ್ಕರೆ ಉದ್ದಿಮೆಗೆ ಸಂಬಂಧಿತ ವಿಷಯಗಳ ಮಾಹಿತಿಯನ್ನು ಪ್ರಕಟಣೆ ಮೂಲಕ ಪ್ರಚುರಪಡಿಸುವುದು. ಸದರಿ ಸಂಸ್ಥೆಯ ಆರ್ಥಿಕ ಸಾಫಲ್ಯತೆಯ ದೃಷ್ಟಿಯಿಂದ ಸರ್ಕಾರವು ಸಂಸ್ಥೆಯು ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೆ ಒಟ್ಟು ರೂ.19.23 ಕೋಟಿಗಳಷ್ಟು ಅನುದಾನವನ್ನು ಹಂತ ಹಂತವಾಗಿ ಮಂಜೂರು ಮಾಡಿ ಬಿಡುಗಡೆ ಮಾಡಿರುತ್ತದೆ. ಇದಲ್ಲದೆ, ರಾಜ್ಯದ ಸಕ್ಕರೆ ಕಾರ್ಖಾನೆಗಳು ನುರಿಸಿದ ಪ್ರತಿ ಟನ್ ಕಬ್ಬಿಗೆ ರೂ.1/- ರಂತೆ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಗಳಿಗಾಗಿ ವಂತಿಕೆಯನ್ನು ಪಾವತಿಸುವಂತೆ ಸರ್ಕಾರವು ಆದೇಶಿಸಿರುತ್ತದೆ. ಅದರಂತೆ ಸಕ್ಕರೆ ಕಾರ್ಖಾನೆಗಳು ಈವರೆಗೆ ಒಟ್ಟು ರೂ.21.96 ಕೋಟಿಗಳಷ್ಟು ಸಂಸ್ಥೆಗೆ ಪಾವತಿಸಿರುತ್ತವೆ.
(ಈ)	ದೇಶದಲ್ಲಿ ಜೈವಿಕ ಇಂಧನಗಳು ಪ್ರಗತಿ ಕಾಣುತ್ತಿರುವ ಹಿನ್ನಲೆಯಲ್ಲಿ ರಾಜ್ಯವು ಬೆಳಗಾವಿಯ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯನ್ನು ಒಂದು ಮಾದರಿ "ಶ್ರೇಷ್ಠ ಹಸಿರು ಇಂಧನ ಕೇಂದ್ರ"ವಾಗಿ (Center of Excellence for Green Energy) ಸ್ಥಾಪಿಸಲು ಕೈಗೊಂಡಿರುವ ಕ್ರಮಗಳೇನು?	ಈ ಸಂಬಂಧ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ ಪ್ರಸ್ತಾವನೆ ಸ್ವೀಕೃತವಾದಲ್ಲಿ ಇದರ ತಾಂತ್ರಿಕ ಮತ್ತು ಹಣಕಾಸಿನ ಸಾಧಕ-ಬಾಧಕಗಳನ್ನು ಪರಿಶೀಲಿಸಿ ಕ್ರಮವಿಡಲಾಗುವುದು.

ಸಂಖ್ಯೆ: ಸಿಐ 105 ಸಿಓಎಫ್ 2021

(ಎನ್.ನಾಗರಾಜು.ಎಂ.ಟಿ.ಬಿ)
ಪೌರಾಡಳಿತ ಮತ್ತು ಸಕ್ಕರೆ ಸಚಿವರು